**ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಪುಟ್ಟಣ್ಣ ರವರ ನಿಯಮ, 72ರ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ**

**ಸೂಚನೆ**

ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು (ಯು.ವಿ.ಸಿ.ಇ) ಎಂಬುದು ಬೆಂಗಳೂರು ವಿಶ್ವವಿದ್ಯಾಲಯದ ಘಟಕ ಕಾಲೇಜಾಗಿದ್ದು ಇದನ್ನು ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜನ್ನು ಯು.ವಿ.ಸಿ.ಇ-2021 ಕಾಯ್ದೆಯ ಮೂಲಕ ಸಾರ್ವಜನಿಕ ವಿಶ್ವವಿದ್ಯಾಲಯವಾಗಿ ಘೋಷಿಸಲಾಗಿದೆ. ಇದರಿಂದ ಹೊಸ ಕಾಯ್ದೆಯಂತೆ ಶೇಕಡ 75 ರಷ್ಟು ಸೀಟುಗಳನ್ನು ಮಾತ್ರ ಸಿ.ಇ.ಟಿ ಮೂಲಕ ಉಳಿದ ಶೇಕಡ 25ರಷ್ಟು ಸೀಟುಗಳನ್ನು ಜೆ.ಇ.ಇ. ಪರೀಕ್ಷೆಯ ಆಧಾರದ ಮೇಲೆ ರಾಷ್ಟ್ರೀಯ ಮಟ್ಟದಲ್ಲಿ ಭರ್ತಿ ಮಾಡಲಾಗುತ್ತಿದೆ. ಇದು ಕರ್ನಾಟಕದ ಬಡ ವಿದ್ಯಾರ್ಥಿಗಳಿಗೆ ದೊಡ್ಡ ನಷ್ಟವನ್ನುಂಟು ಮಾಡಿದೆ. ರಾಜ್ಯದ ಹಣ ನೀಡುತ್ತಿರುವ ಸಂಸ್ಥೆಗೆ ಇತರೆ ರಾಜ್ಯದ ವಿದ್ಯಾರ್ಥಿಗಳನ್ನು ಪ್ರವೇಶ ನೀಡುವುದರ ಮೂಲಕ ರಾಜ್ಯದ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿದೆ. ಈ ಹೊಸ ಕಾಯಿದೆ ಬಂದು ಹಲವು ವರ್ಷಗಳು ಕಳೆದರು ಯಾವುದೇ ಶೈಕ್ಷಣಿಕ ಅಥವಾ ಆಡಳಿತಾತ್ಮಕ ಅಭಿವೃದ್ಧಿ ಅಗಿರುವುದಿಲ್ಲ. ಈ ವಿಶ್ವವಿದ್ಯಾಲಯಕ್ಕೆ ಸಂಬಂಧಪಟ್ಟಂತೆ ಬೋರ್ಡ್ ಆಫ್ ಗವರ್ನರ್ಸ್ ಎಂಬ ಆಡಳಿತ ಮಂಡಳಿಯನ್ನು ಮಾಡಿದ್ದು ಇದಕ್ಕೆ ಅಧ್ಯಕ್ಷರನ್ನಾಗಿ ಬೇರೆ ರಾಜ್ಯದ ಶೈಕ್ಷಣಿಕ ಜ್ಞಾನವಿಲ್ಲದ ವ್ಯಕ್ತಿಯನ್ನು ನೇಮಕ ಮಾಡಿದ್ದು ಅವರು ಪೂರ್ಣ ಪ್ರಮಾಣದಲ್ಲಿ ಆಡಳಿತ ಮಂಡಳಿಯನ್ನು ರಚನೆ ಮಾಡಿರುವುದಿಲ್ಲ. ಯಾವುದೇ ಅಕಾಡೆಮಿಕ್ ಅಥವಾ ಆಡಳಿತಾತ್ಮಕ ನಿಯಮಗಳನ್ನು ರೂಪಿಸಿರುವುದಿಲ್ಲ. ಇದರಿಂದ ನೂರಾರು ವರ್ಷಗಳ ಇತಿಹಾಸವಿರುವ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ಅವನತಿಯತ್ತ ಸಾಗುತ್ತಿದ್ದು ಕಾಲೇಜಿನಲ್ಲಿ ಆಡಳಿತಾತ್ಮಕ ಸಮಸ್ಯೆಗಳು ತಲೆದೋರಿವೆ. ಆದ್ದರಿಂದ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜನ್ನು ಹಿಂದಿನಂತೆ ಬೆಂಗಳೂರು ವಿಶ್ವವಿದ್ಯಾಲಯದಲ್ಲಿಯೇ ಮುಂದುವರೆಸಬೇಕೆಂಬ ವಿಷಯವನ್ನು ನಿಯಮ 72ರಲ್ಲಿ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುತ್ತೇನೆ.

**ಉತ್ತರ**

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 48 ಶಾಸನ, 2021, ದಿನಾಂಕ:28.02.2022ರ ಪ್ರಕಾರ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯವು (ಯುವಿಸಿಇ) ಮೂಲ ಬೆಂಗಳೂರು ವಿಶ್ವವಿದ್ಯಾಲಯದಿಂದ ಬೇರ್ಪಟ್ಟು ಪ್ರತ್ಯೇಕ ವಿಶ್ವವಿದ್ಯಾಲಯವಾಗಿ ಸೃಜನೆಯಾಗಿದೆ. ಅದರಂತೆ, ಈ ವಿಶ್ವವಿದ್ಯಾಲಯವು ದಿನಾಂಕ:01.04.2023 ರಿಂದ ಅಧಿಕೃತವಾಗಿ ಅಸ್ತಿತ್ವಕ್ಕೆ ಬಂದಿರುತ್ತದೆ. ವಿಶ್ವವಿದ್ಯಾಲಯವು ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯ ಅಧಿನಿಯಮ, 2021 ರಲ್ಲಿನ ನಿಯಮಾವಳಿಗಳಂತೆ ಕಾರ್ಯನಿರ್ವಹಿಸುತ್ತಿದೆ.

ಮೇಲ್ಕಂಡ ಅಧಿನಿಯಮದ ಕಲಂ 6(2) ರಲ್ಲಿ ನಿರ್ದಿಷ್ಟಪಡಿಸಿರುವಂತೆ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಿಗೆ ವೃತ್ತಿಪರ ಇಂಜಿನಿಯರಿಂಗ್ ಕೋರ್ಸುಗಳ ಪ್ರವೇಶಾತಿಯಲ್ಲಿ ಶೇ. 75 ರಷ್ಟು ಸೀಟುಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಹಾಗೂ ಶೇ. 25 ರ ಸೀಟುಗಳನ್ನು ರಾಷ್ಟ್ರ ಮಟ್ಟದಲ್ಲಿ ನಡೆಸುವ ಜಂಟಿ ಪರೀಕ್ಷೆಯ (ಜೆ.ಇ.ಇ) ಮೂಲಕ ಭರ್ತಿ ಮಾಡಲಾಗುತ್ತಿದೆ. ಸ್ನಾತಕ ಪದವಿಗಳಿಗೆ ಸಂಬಂಧಿಸಿದ ಪಠ್ಯಕ್ರಮಗಳನ್ನು ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಿರುವಂತೆ ಇತರ ರಾಷ್ಟ್ರೀಯ ಮಹತ್ವದ ಸಂಸ್ಥೆಗಳ ಮಾದರಿಯಲ್ಲಿ ಪರಿಷ್ಕರಿಸಲಾಗುತ್ತಿದೆ.

ಅಧಿನಿಯಮದ ಕಲಂ, 23 ರಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತ ಮಂಡಳಿಯ ಅಧ್ಯಕ್ಷರ ನೇಮಕಕ್ಕೆ ನಿಯಮಾವಳಿಗಳನ್ನು ರೂಪಿಸಲಾಗಿದೆ. ಅದರಡಿ ಇಂಜಿನಿಯರಿಂಗ್, ವಿಜ್ಞಾನ, ತಂತ್ರಜ್ಞಾನ, ವ್ಯವಸ್ಥಾಪನ, ಕೈಗಾರಿಕಾ ಕ್ಷೇತ್ರದಲ್ಲಿ ಅಥವಾ ಸಂಬಂಧಿತ ಕ್ಷೇತ್ರದಲ್ಲಿ ಸುಪ್ರಸಿದ್ಧ ವ್ಯಕ್ತಿಯಾಗಿದ್ದಲ್ಲಿ ಅಂತಹ ವ್ಯಕ್ತಿಗಳನ್ನು ಅಧ್ಯಕ್ಷರನ್ನಾಗಿ ನೇಮಿಸಲು ಅನುವು ಮಾಡಿಕೊಡಲಾಗಿದೆ. ಸದರಿ ಮಾನದಂಡಗಳನ್ನು ಅನುಸರಿಸಿ, ಟಾಟಾ ಸಂಸ್ಥೆಯ ಮಾಜಿ ಉಪಾಧ್ಯಕ್ಷರು ಹಾಗೂ ಇತರ ರಾಷ್ಟ್ರೀಯ ಮಹತ್ವದ ಸಂಸ್ಥೆಗಳಲ್ಲಿ ಸದಸ್ಯರಾಗಿ ಹಾಗೂ ಅಧ್ಯಕ್ಷರಾಗಿ ಅನುಭವವನ್ನು ಹೊಂದಿರುವ ಪದ್ಮಭೂಷಣ ಶ್ರೀ ಮುತ್ತುರಾಮನ್ ರವರನ್ನು ಸರ್ಕಾರದ ಶಿಫಾರಸ್ಸಿನ ಮೇರೆಗೆ ಮಾನ್ಯ ರಾಜ್ಯಪಾಲರು ದಿನಾಂಕ: 10.08.2022 ರ ಅಧಿಸೂಚನೆಯಲ್ಲಿ 04 ವರ್ಷಗಳ ಅವಧಿಗೆ ವಿಶ್ವವಿದ್ಯಾಲಯದ ಆಡಳಿತ ಮಂಡಳಿಯ ಅಧ್ಯಕ್ಷರನ್ನಾಗಿ ನೇಮಕ ಮಾಡಿರುತ್ತಾರೆ. ಈ ನಡುವೆ ಶ್ರೀ ಮುತ್ತುರಾಮನ್ ರವರು ಅನಾರೋಗ್ಯದ ಕಾರಣ ನೀಡಿ ತಮ್ಮ ರಾಜೀನಾಮೆಯನ್ನು ಅಂಗೀಕರಿಸುವಂತೆ ಸರ್ಕಾರವನ್ನು ಕೋರಿರುತ್ತಾರೆ. ಅದರನ್ವಯ ಇವರ ಬದಲಿಗೆ ಬೇರೊಬ್ಬ ಅರ್ಹ ಅಧ್ಯಕ್ಷರನ್ನು ನೇಮಕ ಮಾಡುವ ಪ್ರಸ್ತಾವನೆಯನ್ನು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

ಅಧಿನಿಯಮ, 2021ರ ಕಲಂ, 9 ರಡಿ ಆಡಳಿತ ಮಂಡಳಿಯ ಸದಸ್ಯರುಗಳನ್ನು ನೇಮಿಸಲು / ನಿಯೋಜಿಸಲು ಅವಕಾಶ ಕಲ್ಪಿಸಲಾಗಿದೆ. ಸದರಿ ಕಲಂನಲ್ಲಿ ನಿಗಧಿಪಡಿಸಲಾದ ಅರ್ಹತೆ/ಮಾನದಂಡಗಳನ್ನು ಆಧರಿಸಿ ಮಾನ್ಯ ರಾಜ್ಯಪಾಲರು ದಿನಾಂಕ:11.10.2022 ರ ಅಧಿಸೂಚನೆಯಡಿ ವಿಶ್ವವಿದ್ಯಾಲಯಕ್ಕೆ ಆಡಳಿತ ಮಂಡಳಿಯ ಸದಸ್ಯರುಗಳನ್ನು ನೇಮಕ ಮಾಡಲಾಗಿರುತ್ತದೆ.

ಈ ವಿಶ್ವವಿದ್ಯಾಲಯವು ಹೊಸದಾಗಿ ಅಸ್ತಿತ್ವಕ್ಕೆ ಬಂದಿರುವ ಕಾರಣ ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದ ಪರಿನಿಯಮ (Statutes) ಹಾಗೂ ನೀತಿ-ನಿಯಮಗಳನ್ನು (Rules & Regulations) ರೂಪಿಸುವ ನಿಟ್ಟಿನಲ್ಲಿ ಈಗಾಗಲೇ ಸಮಿತಿಗಳನ್ನು ರಚಿಸಲಾಗಿದ್ದು, ಅವು ಪೂರ್ಣಗೊಳ್ಳುವ ಹಂತದಲ್ಲಿರುತ್ತವೆ. ಸದರಿ ಸಮಿತಿಗಳು ಸಲ್ಲಿಸುವ ವರದಿಯನ್ನು ಪರಿಶೀಲಿಸಿ ಮುಂದಿನ ಪ್ರಕ್ರಿಯೆ ಕೈಗೊಳ್ಳಲಾಗುತ್ತದೆ.

ವಿಶ್ವವಿದ್ಯಾಲಯಕ್ಕೆ ಅವಶ್ಯವಿರುವ ಮೂಲ ಸೌಕರ್ಯಗಳು, ಯಂತ್ರೋಪಕರಣಗಳು, ಉನ್ನತೀಕರಣ ಇವುಗಳನ್ನು ಕಾರ್ಯರೂಪಕ್ಕೆ ತರಲು ಸರ್ಕಾರದಿಂದ ಆಯವ್ಯಯದಲ್ಲಿ ರೂ.50.00 ಕೋಟಿಗಳನ್ನು ನಿಗಧಿಪಡಿಸಿದ್ದು, ಇದರಲ್ಲಿ, ರೂ. 32.04 ಕೋಟಿಗಳಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಮುಂದುವರಿದು, ಬೆಂಗಳೂರು ವಿಶ್ವವಿದ್ಯಾಲಯವು ಜ್ಞಾನಭಾರತಿ ಆವರಣದಲ್ಲಿ ನೀಡಿರುವ 52.00 ಎಕರೆ ಪ್ರದೇಶದಲ್ಲಿ ಹೊಸ ಕ್ಯಾಂಪಸ್ ನಿರ್ಮಾಣದ ಯೋಜನೆಗೆ ಮಾಸ್ಟರ್ ಪ್ಲಾನ್ ರೂಪಿಸಲಾಗುತ್ತಿದೆ. ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು, ಬೆಂಗಳೂರು ಸಂಸ್ಥೆಯನ್ನು ಹಿಂದಿನಂತೆ ಬೆಂಗಳೂರು ವಿಶ್ವವಿದ್ಯಾಲಯದಲ್ಲಿಯೇ ಮುಂದುವರೆಸುವ ಪ್ರಸ್ತಾವನೆ ಸರ್ಕಾರದ ಪರಿಗಣನೆಯಲ್ಲಿ ಇರುವುದಿಲ್ಲ.

**ಸಂಖ್ಯೆ:ಇಡಿ 68 ಟಿಜಿಎಲ್ 2025**

**(ಡಾ|| ಎಂ.ಸಿ.ಸುಧಾಕರ್)**
ಉನ್ನತ ಶಿಕ್ಷಣ ಸಚಿವರು